# All India Radio: Bangalore
# National Bulletin In Kannada
# 06.05.2026  1.10 p.m.

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**06.05.2026  1.10 p.m.**

**<><><><>**

ಮುಖ್ಯಾಂಶಗಳು

1. ದೇಶದಲ್ಲಿ ಮೂಲಸೌಕರ್ಯ ವೃದ್ಧಿಗೆ ಕೈಗೊಂಡಿರುವ ನಿರ್ಧಾರಗಳಿಂದ ಆರ್ಥಿಕ ಪ್ರಗತಿಗೆ ಮತ್ತಷ್ಟು ಒತ್ತು- ಪ್ರಧಾನಿ ನರೇಂದ್ರ ಮೋದಿ
2. ಭಾರತ ಪ್ರವಾಸದಲ್ಲಿರುವ ವಿಯೇಟ್ನಾಂ ಅಧ್ಯಕ್ಷ ತೋ ಲಾಮ್ ಅವರೊಂದಿಗೆ ಪ್ರಧಾನಿ ದ್ವಿಪಕ್ಷೀಯ ಚರ್ಚೆ
3. ದೇಶಾದ್ಯಂತ ಏಕಲವ್ಯ ಮಾದರಿ ವಸತಿ ಶಾಲೆಗಳ ನಿರ್ಮಾಣ; ಪ್ರಗತಿ ಪರಿಶೀಲನೆ ನಡೆಸಿದ ಕೇಂದ್ರ ಸಚಿವ ಜುಯಲ್ ಓರಮ್
4. ಪಂಚ ರಾಜ್ಯಗಳ ಚುನಾವಣಾ ಪ್ರಕ್ರಿಯೆ ಮುಕ್ತಾಯ; ಹೊಸ ವಿಧಾನಸಭೆಯ ರಚನೆಗೆ ಅಧಿಸೂಚನೆ ಹೊರಡಿಸಿದ ಚುನಾವಣಾ ಆಯೋಗ
5. ಐಪಿಎಲ್ ಟಿ-೨೦ ಕ್ರಿಕೆಟ್; ಇಂದು ಸನ್ ರೈಸರ್ಸ್ ಹೈದರಾಬಾದ್ -ಪಂಜಾಬ್ ಕಿಂಗ್ಸ್ ಹಣಾಹಣಿ

<><><><>

ದೇಶದ ಮೂಲಸೌಕರ್ಯ ವೃದ್ಧಿಗೆ ಸಂಪುಟ ಕೈಗೊಂಡಿರುವ ಹಲವು ನಿರ್ಣಯಗಳು ಆರ್ಥಿಕ ಪ್ರಗತಿಗೆ ಮತ್ತಷ್ಟು ಒತ್ತು ನೀಡಲಿವೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಅವರು, ತಮ್ಮ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಕೇಂದ್ರ ಸಂಪುಟ ಕರ್ನಾಟಕ ಸೇರಿದಂತೆ ಆರು ರಾಜ್ಯಗಳ ೧೯ ಜಿಲ್ಲೆಗಳನ್ನೊಳಗೊಂಡ ಮೂರು ರೈಲ್ವೆ ಯೋಜನೆಗಳಿಗೆ ಒಪ್ಪಿಗೆ ನೀಡಿದೆ. ಇದರಿಂದ ಸಂಪರ್ಕ ವೃದ್ಧಿಯಾಗುವುದಲ್ಲದೇ, ರೈಲ್ವೆ ಕಾರ್ಯಾಚರಣೆಯ ದಕ್ಷತೆ ಸುಧಾರಿಸಲಿದೆ ಮತ್ತು ರಾಷ್ಟ್ರದ ಪ್ರಮುಖ ಪ್ರವಾಸಿ ತಾಣಗಳ ಸಂಪರ್ಕ ಮತ್ತಷ್ಟು ಸುಲಭವಾಗಲಿದೆ ಎಂದು ಹೇಳಿದ್ದಾರೆ. ಅಲ್ಲದೆ, ಸುಪ್ರೀಂಕೋರ್ಟ್ ನ್ಯಾಯಮೂರ್ತಿಗಳ ಸಂಖ್ಯೆ ಹೆಚ್ಚಳಕ್ಕೆ ಸಂಪುಟ ಮಹತ್ವದ

ನಿರ್ಧಾರ ಕೈಗೊಂಡಿರುವುದರಿಂದ ನ್ಯಾಯಾಂಗದಲ್ಲಿ ಮೂಲಸೌಕರ್ಯ ಬಲಗೊಳ್ಳುವುದಲ್ಲದೆ, ಜನರಿಗೆ ತ್ವರಿತ ನ್ಯಾಯದಾನವಾಗಲಿದೆ ಎಂದು ಪ್ರಧಾನಿ ತಿಳಿಸಿದ್ದಾರೆ.

<><><><>

ಪ್ರಧಾನಿ ನರೇಂದ್ರ ಮೋದಿ ದೆಹಲಿಯಲ್ಲಿಂದು ಭಾರತ ಪ್ರವಾಸದಲ್ಲಿರುವ ವಿಯೇಟ್ನಾಂ ಅಧ್ಯಕ್ಷ ತೋ ಲಾಮ್ ಅವರೊಂದಿಗೆ ದ್ವಿಪಕ್ಷೀಯ ಚರ್ಚೆ ನಡೆಸುತ್ತಿದ್ದಾರೆ. ಉಭಯ ನಾಯಕರು, ಹೈದರಾಬಾದ್ ಹೌಸ್‌ನಲ್ಲಿ ಪರಸ್ಪರ ಹಿತಾಸಕ್ತಿಯ ಪ್ರಾದೇಶಿಕ ಮತ್ತು ಜಾಗತಿಕ ವಿಚಾರಗಳು ಸೇರಿದಂತೆ ದ್ವಿಪಕ್ಷೀಯ ಸಂಬಂಧದ ಹಲವು ಆಯಾಮಗಳ ಬಗ್ಗೆ ಸಮಾಲೋಚನೆಯಲ್ಲಿ ತೊಡಗಿದ್ದಾರೆ. ದ್ವಿಪಕ್ಷೀಯ ಮಾತುಕತೆಯ ನಂತರ ಹಲವು ಒಪ್ಪಂದಗಳಿಗೆ ಸಹಿ ಹಾಕುವ ನಿರೀಕ್ಷೆಯಿದೆ. ಸಂಜೆ ರಾಷ್ಟ್ರಪತಿ ಭವನದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ವಿಯೇಟ್ನಾಂ ಅಧ್ಯಕ್ಷರೊಂದಿಗೆ ಸಭೆ ನಡೆಸಲಿದ್ದಾರೆ.

ಮೂರು ದಿನಗಳ ಭಾರತ ಪ್ರವಾಸ ಕೈಗೊಂಡಿರುವ ವಿಯೇಟ್ನಾಂ ಅಧ್ಯಕ್ಷರಿಗೆ ಇಂದು ಬೆಳಗ್ಗೆ ರಾಷ್ಟ್ರಪತಿ ಭವನದಲ್ಲಿ ಸಾಂಪ್ರದಾಯಕ ಸ್ವಾಗತ ಕೋರಲಾಯಿತು. ರಾಷ್ಟ್ರಪತಿ ದ್ರೌಪದಿ ಮುರ್ಮು, ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಸಚಿವರಾದ ಪಿಯೂಷ್ ಗೋಯಲ್, ಅಶ್ವಿನಿವೈಷ್ಣವ್ ಮತ್ತು ಡಾ.ಜಿತೇಂದ್ರ ಸಿಂಗ್ ಮತ್ತಿತರರು ವಿಯೇಟ್ನಾಂ ಅಧ್ಯಕ್ಷರನ್ನು ಆತ್ಮೀಯವಾಗಿ ಬರಮಾಡಿಕೊಂಡರು. ಆ ನಂತರ ವಿಯೇಟ್ನಾಂ ಅಧ್ಯಕ್ಷರು ರಾಜ್‌ಘಾಟ್‌ಗೆ ಭೇಟಿ ನೀಡಿ, ರಾಷ್ಟ್ರಪಿತ ಮಹಾತ್ಮಾಗಾಂಧೀಜಿಯವರ ಸ್ಮಾರಕಕ್ಕೆ ಪುಷ್ಪನಮನ ಸಲ್ಲಿಸಿದರು.

<><><><>

ಕೇಂದ್ರ ಬುಡಕಟ್ಟು ವ್ಯವಹಾರಗಳ ಸಚಿವ ಜುಯಲ್ ಓರಮ್ ದೆಹಲಿಯಲ್ಲಿಂದು ದೇಶಾದ್ಯಂತ ಏಕಲವ್ಯ ಮಾದರಿ ವಸತಿ ಶಾಲೆಗಳ ನಿರ್ಮಾಣ ಕುರಿತ ಪ್ರಗತಿ ಪರಿಶೀಲನಾ ಸಭೆ ನಡೆಸಿದರು. ಸಭೆಯಲ್ಲಿ ಮಾದರಿ ವಸತಿ ಶಾಲೆಗಳ ನಿರ್ಮಾಣದ ತಳಮಟ್ಟದಲ್ಲಿ ನಡೆಯುತ್ತಿರುವ ಕಾಮಗಾರಿಗಳು, ಅವುಗಳ ಗುಣಮಟ್ಟದ ಕುರಿತು ಪರಿಶೀಲನೆ ನಡೆಸಲಾಯಿತು ಎಂದು ಸಚಿವರು ತಮ್ಮ ಸಾಮಾಜಿಕ ಜಾಲತಾಣದಲ್ಲಿ ವಿವರವನ್ನು ಹಂಚಿಕೊಂಡಿದ್ದಾರೆ. ನಿರ್ಮಾಣ ಯೋಜನೆ, ಉತ್ತಮ ಗುಣಮಟ್ಟದೊಂದಿಗೆ ಸಕಾಲದಲ್ಲಿ ಪೂರ್ಣಗೊಳ್ಳಬೇಕು ಹಾಗೂ ಬುಡಕಟ್ಟು ವಿದ್ಯಾರ್ಥಿಗಳಿಗೆ ವಿಶ್ವದರ್ಜೆಯ ಶೈಕ್ಷಣಿಕ ಮೂಲಸೌಕರ್ಯ ಒದಗಿಸಲು ಸರ್ಕಾರ ಬದ್ಧವಿದೆ ಎಂದು ಸಚಿವರು ಪುನರುಚ್ಚರಿಸಿದ್ದಾರೆ.

<><><><>

ಪಶ್ಚಿಮ ಬಂಗಾಳ, ಅಸ್ಸಾಂ, ಕೇರಳ, ತಮಿಳುನಾಡು ಮತ್ತು ಪುದುಚೆರಿ ರಾಜ್ಯಗಳಲ್ಲಿ ವಿಧಾನಸಭಾ ಚುನಾವಣಾ ಪ್ರಕ್ರಿಯೆ ಮುಕ್ತಾಯಗೊಂಡಿರುವುದರಿಂದ ಚುನಾವಣಾ ಆಯೋಗ ಹೊಸ ವಿಧಾನಸಭೆಯ ರಚನೆಗೆ ಅಧಿಕೃತ ಅಧಿಸೂಚನೆಯನ್ನು ಹೊರಡಿಸಿದೆ. ಈ ಕುರಿತಂತೆ, ಆಯಾ ರಾಜ್ಯಗಳ ಚುನಾವಣಾಧಿಕಾರಿಗಳು, ಎಲ್ಲಾ ಐದು ರಾಜ್ಯಗಳ ರಾಜ್ಯಪಾಲರು ಹಾಗೂ ಕೇಂದ್ರಾಡಳಿತ ಪ್ರದೇಶದ ಲೆಫ್ಟಿನೆಂಟ್ ಗವರ್ನರ್‌ಗಳಿಗೆ ಚುನಾವಣಾ ಪ್ರಕ್ರಿಯೆ ಮುಕ್ತಾಯದ ಕುರಿತು ಹಾಗೂ ಹೊಸ ಸರ್ಕಾರಗಳ ರಚನೆಗೆ ಅನುವು ಮಾಡಿಕೊಡುವಂತೆ ಅಧಿಸೂಚನೆಯನ್ನು ರವಾನಿಸಿದ್ದಾರೆ. ಐದು ರಾಜ್ಯಗಳ ಚುನಾವಣಾ ಫಲಿತಾಂಶ ಹೊರಬಿದ್ದು, ಪ್ರಕ್ರಿಯೆ ಪೂರ್ಣಗೊಂಡ ನಂತರ ಅಧಿಸೂಚನೆ ಹೊರಡಿಸುವುದು ಅತ್ಯಂತ ಪ್ರಮುಖ ಸಾಂವಿಧಾನಿಕ ಕ್ರಮವಾಗಿದೆ. ಇದರೊಂದಿಗೆ ಚುನಾವಣಾ ಆಯೋಗದ ಕರ್ತವ್ಯಗಳೆಲ್ಲಾ ಪೂರ್ಣಗೊಂಡಿದ್ದು, ಇನ್ನೂ ಹೊಸ ವಿಧಾನಸಭೆಗಳ ರಚನೆಗೆ ಹಾದಿ ಸುಗಮವಾಗಿದೆ ಎಂದು ಚುನಾವಣಾ ಆಯೋಗದ ಅಧಿಕಾರಿಗಳು ತಿಳಿಸಿದ್ದಾರೆ. ಮುಂದಿನ ಹಂತದಲ್ಲಿ ಆಯಾ ರಾಜ್ಯಗಳ ರಾಜ್ಯಪಾಲರುಗಳು, ಬಹುಮತ ಪಡೆದಿರುವ ಪಕ್ಷಗಳಿಗೆ ಹೊಸ ಸರ್ಕಾರಗಳ ರಚನೆಗೆ ಅವಕಾಶ ಮಾಡಿಕೊಡುವುದು ಸಾಂವಿಧಾನಿಕ ಕರ್ತವ್ಯವಾಗಿದೆ.

<><><><>

ಭಾರತವು ಪ್ರಜಾಪ್ರಭುತ್ವ ರಾಷ್ಟ್ರವಾಗಿದ್ದು, ಅದನ್ನು ಸದಾ ಎಲ್ಲರೂ ಗೌರವಿಸಬೇಕು ಎಂದು ಭಾರತೀಯ ಜನತಾ ಪಕ್ಷ ತಿಳಿಸಿದೆ. ಪಶ್ಚಿಮ ಬಂಗಾಳದ ನಿರ್ಗಮಿತ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ರಾಜೀನಾಮೆ ನೀಡಲು ನಿರಾಕರಿಸಿರುವ ಹೇಳಿಕೆ ಕುರಿತಂತೆ ಪ್ರತಿಕ್ರಿಯಿಸಿರುವ ಬಿಜೆಪಿ ವಕ್ತಾರ ಸಂಬೀತ್ ಪಾತ್ರಾ, ಅಂತಹ ಹೇಳಿಕೆಗಳು ಅರಾಜಕತೆಯಿಂದ ಕೂಡಿವೆ ಎಂದು ಬಣ್ಣಿಸಿದ್ದಾರೆ. ಅಲ್ಲದೆ, ಅಂತಹ ಹೇಳಿಕೆಗಳನ್ನು ನೀಡುವಾಗ ಬಹಳ ಸಂಯಮದಿಂದ ನಡೆದುಕೊಳ್ಳಬೇಕಾಗುತ್ತದೆ ಎಂದು ಪ್ರತಿಕ್ರಿಯಿಸಿದ್ದಾರೆ.

<><><><>

ತಮಿಳುನಾಡು ವಿಧಾನಸಭಾ ಚುನಾವಣೆಯಲ್ಲಿ ಅತಿ ದೊಡ್ಡ ಪಕ್ಷವಾಗಿ ಹೊರಹೊಮ್ಮಿರುವ ಟಿವಿಕೆ ಇಂದು ರಾಜ್ಯದಲ್ಲಿ ಹೊಸ ಸರ್ಕಾರ ರಚನೆಯ ಹಕ್ಕು ಮಂಡಿಸುವ ಸಾಧ್ಯತೆಯಿದೆ. ಪಕ್ಷದ ನಾಯಕರಾಗಿ ಆಯ್ಕೆಯಾಗಿರುವ ಜೋಸೆಫ್ ವಿಜಯ್ ಇಂದು ರಾಜ್ಯಪಾಲ ರಾಜೇಂದ್ರ ವಿಶ್ವನಾಥ್

ಅರ್ಲೇಕರ್ ಅವರನ್ನು ಭೇಟಿ ಮಾಡಿ, ಹೊಸ ಸರ್ಕಾರ ರಚನೆಗೆ ಹಕ್ಕು ಮಂಡಿಸಲಿದ್ದಾರೆ ಎಂದು ಪಕ್ಷದ ನಾಯಕರು ತಿಳಿಸಿದ್ದಾರೆ. ಟಿವಿಕೆ ರಾಜ್ಯದಲ್ಲಿ ೧೦೮ ಸ್ಥಾನಗಳನ್ನು ಗೆಲ್ಲುವ ಮೂಲಕ ಅತಿದೊಡ್ಡ ಪಕ್ಷವಾಗಿ ಹೊರಹೊಮ್ಮಿದ್ದರೂ ಸಹ ಬಹುಮತ ಸಾಬೀತುಪಡಿಸಲು ಆ ಪಕ್ಷಕ್ಕೆ ಇನ್ನೂ ೧೦ ಶಾಸಕರ ಬೆಂಬಲ ಅಗತ್ಯವಿದೆ.

<><><>

ಪಶ್ಚಿಮ ಬಂಗಾಳದಲ್ಲಿ ಶಾಸಕಾಂಗ ಪ್ರಕ್ಷದ ನೂತನ ನಾಯಕನ ಆಯ್ಕೆಗೆ ಸಂಬಂಧಿಸಿದ ಚುಟುವಟಿಕೆಗಳ ಮೇಲೆ ನಿಗಾವಹಿಸಲು ಬಿಜೆಪಿ ಹಿರಿಯ ನಾಯಕ, ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರನ್ನು ಕೇಂದ್ರ ವೀಕ್ಷಕರನ್ನಾಗಿ ನೇಮಿಸಿದೆ. ಅಲ್ಲದೆ, ಒಡಿಶಾ ಮುಖ್ಯಮಂತ್ರಿ ಮೋಹನ್ ಚರಣ್ ಮಾಂಜಿ ಅವರನ್ನು ಸಹ ಅಧ್ಯಕ್ಷರನ್ನಾಗಿ ನೇಮಿಸಲಾಗಿದೆ. ಅಂತೆಯೇ ಅಸ್ಸಾಂನಲ್ಲಿ ನೂತನ ಶಾಸಕಾಂಗ ಪಕ್ಷದ ನಾಯಕನ ಆಯ್ಕೆಗೆ ಕೇಂದ್ರ ಸಚಿವ ಜೆ.ಪಿ.ನಡ್ಡಾ ಅವರನ್ನು ಕೇಂದ್ರ ವೀಕ್ಷಕರನ್ನಾಗಿ ನೇಮಿಸಲಾಗಿದ್ದು, ಸಹ ಅಧ್ಯಕ್ಷರನ್ನಾಗಿ ಹರಿಯಾಣ ಮುಖ್ಯಮಂತ್ರಿ ನಯಾಬ್ ಸಿಂಗ್ ಸೈನಿ ಅವರನ್ನು ಪಕ್ಷ ನೇಮಿಸಿದೆ. ಅಂತೆಯೇ ಪುದುಚೆರಿಯಲ್ಲಿ ನೂತನ ಶಾಸಕಾಂಗ ಪಕ್ಷದ ನಾಯಕನ ಆಯ್ಕೆಗೆ ಕೇಂದ್ರ ವೀಕ್ಷಕರನ್ನಾಗಿ ಕೇಂದ್ರ ಸಚಿವ ಮನ್ಸೂಖ್ ಮಾಂಡವೀಯ ಹಾಗೂ ಬಿಜೆಪಿ ಪುದುಚೆರಿ ಉಸ್ತುವಾರಿ ನಿರ್ಮಲ್ ಕುಮಾರ್ ಸುರಾನಾ ಅವರನ್ನು ನೇಮಕ ಮಾಡಲಾಗಿದೆ ಎಂದು ಬಿಜೆಪಿ ತಿಳಿಸಿದೆ. ಬಿಜೆಪಿಯ ಸಂಸದೀಯ ಮಂಡಳಿ ಸಭೆ ಈ ನೇಮಕಾತಿಗಳನ್ನು ಅನುಮೋದಿಸಿದೆ.

<><><>

ಚುನಾವಣಾ ನಂತರದ ಯಾವುದೇ ಹಿಂಸಾಚಾರ ಘಟನೆಗಳನ್ನು ನಿಯಂತ್ರಿಸಲು ಶೂನ್ಯ ಸಹಿಷ್ಣುತೆ ನೀತಿಯನ್ನು ಜಾರಿಗೊಳಿಸುವಂತೆ ಕೇಂದ್ರ ಚುನಾವಣಾ ಆಯೋಗ ಪಶ್ಚಿಮ ಬಂಗಾಳದ ಮುಖ್ಯ ಕಾರ್ಯದರ್ಶಿ, ರಾಜ್ಯ ಪೊಲೀಸ್ ಮಹಾನಿರ್ದೇಶಕ ಹಾಗೂ ಕೇಂದ್ರೀಯ ಸಶಸ್ತ್ರ ಪೊಲೀಸ್ ಪಡೆಗಳಿಗೆ ನಿರ್ದೇಶನ ನೀಡಿದೆ. ಚುನಾವಣಾ ಫಲಿತಾಂಶ ಹೊರಬಿದ್ದ ನಂತರ ಕಾನೂನು ಸುವ್ಯವಸ್ಥೆಯನ್ನು ಕಾಯ್ದುಕೊಳ್ಳಲು ತಕ್ಷಣ ತುರ್ತು ಕಠಿಣಕ್ರಮಗಳನ್ನು ಕೈಗೊಳ್ಳುವ ಅಗತ್ಯತೆಯಿದೆ ಎಂದು ಆಯೋಗ ನಿರ್ದೇಶಿಸಿದೆ. ಅಲ್ಲದೆ, ಚುನಾವಣಾ ಫಲಿತಾಂಶಕ್ಕೆ ಸಂಬಂಧಿಸಿದ ಯಾವುದೇ ಗಲಭೆ, ಪ್ರಚೋದನೆ ಮತ್ತಿತರ ಕೃತ್ಯಗಳನ್ನು ತಡೆಯಲು ರಾಜ್ಯ ಆಡಳಿತ ಹಾಗೂ ಭದ್ರತಾ ಸಂಸ್ಥೆಗಳು ಎಲ್ಲಾ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಆಯೋಗ ಸೂಚಿಸಿದೆ.

ವಿಶೇಷವಾಗಿ ಸೂಕ್ಷ್ಮ ಪ್ರದೇಶಗಳಲ್ಲಿ ಕಾನೂನು ಸುವ್ಯವಸ್ಥೆ ಕಾಯ್ದುಕೊಳ್ಳುವುದರ ಜೊತೆಗೆ ಎಲ್ಲಾ ನಾಗರಿಕರಿಗೆ ಭದ್ರತೆ ಹಾಗೂ ಸುರಕ್ಷತೆಯನ್ನು ರಾಜ್ಯದ ಆಡಳಿತ ಖಾತ್ರಿಪಡಿಸಬೇಕು ಎಂದು ಚುನಾವಣಾ ಆಯೋಗ ಸೂಚನೆ ನೀಡಿದೆ.

<><><>

ಆಡಳಿತದ ಮುಂದೆ ನೈಜ ಸಮಯದ ನಿಗಾ ವಹಿಸುವುದನ್ನು ಬಲವರ್ಧನೆಗೊಳಿಸುವ ಉದ್ದೇಶದ ಕೇಂದ್ರೀಯ ಪ್ರಭಾರಿ ಅಧಿಕಾರಿ- ಸಿಪಿಒ ಪೋರ್ಟಲ್ ಅನ್ನು ನೀತಿ ಆಯೋಗ ಇಂದು ಬಿಡುಗಡೆ ಮಾಡಿದೆ. ಆಶೋತ್ತರ ಜಿಲ್ಲೆಗಳು ಮತ್ತು ಬ್ಲಾಕ್ ಅಭಿವೃದ್ಧಿ ಕಾರ್ಯಕ್ರಮಗಳು ತಳಮಟ್ಟದಲ್ಲಿ ಜಾರಿಯಾಗುತ್ತಿರುವ ಬಗ್ಗೆ ಪಾಲುದಾರರ ನಡುವೆ ಸಮನ್ವಯ ಸುಧಾರಿಸುವ ಉದ್ದೇಶವನ್ನು ಈ ಪೋರ್ಟಲ್ ಹೊಂದಿದೆ. ನೀತಿ ಆಯೋಗದ ಮುಖ್ಯ ಕಾರ್ಯನಿರ್ವಹಣಾಧಿಕಾರಿ ನಿಧಿ ಚೆಬ್ಬರ್, ಈ ಸಿಪಿಒ ಪೋರ್ಟಲ್ ವಿಶ್ವಾಸ ವೃದ್ಧಿ, ಪಾರದರ್ಶಕತೆ ಮತ್ತು ಸ್ಪಂದನಾ ಶೀಲ ಆಡಳಿತದ ನಿಟ್ಟಿನಲ್ಲಿ ಮಹತ್ವದ ಹೆಜ್ಜೆಯನ್ನು ಪ್ರತಿಬಿಂಬಿಸುತ್ತದೆ. ಇದು ತಳಮಟ್ಟದಲ್ಲಿ ನಡೆಯುತ್ತಿರುವ ಕಾರ್ಯಕ್ರಮಗಳ ಸಂಪೂರ್ಣ ಮೇಲ್ವಿಚಾರಣೆ ನಡೆಸುವುದಲ್ಲದೆ, ನೀತಿ ನಿರ್ದೇಶನಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ನೆರವಾಗಲಿದೆ ಎಂದು ಹೇಳಿದ್ದಾರೆ.

<><><>

ಹೈದರಾಬಾದ್‌ನ ರಾಜೀವ್ ಗಾಂಧಿ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಸನ್ ರೈಸರ್ಸ್ ಹೈದರಾಬಾದ್ ಹಾಗೂ ಪಂಜಾಬ್ ಕಿಂಗ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭.೩೦ ಆರಂಭವಾಗಲಿದೆ.

<><><>

ಭಾರತದ ನಿರಂತರ ಸಾಗರ ಸಹಭಾಗಿತ್ವದ ಭಾಗವಾಗಿ ಭಾರತೀಯ ನೌಕಾಪಡೆಯ ಹಡಗು ಸುನೈನಾ ಮ್ಯಾನ್ಮಾರ್‌ನ ಯಾಂಗೋನ್ ಬಂದರನ್ನು ತಲುಪಿದೆ. ಈ ನೌಕೆಯ ಭೇಟಿ, ನೌಕಾಪಡೆಯ ಮುಖ್ಯಸ್ಥ ಅಡ್ಮಿರಲ್ ದಿನೇಶ್ ಕೆ ತ್ರಿಪಾಠಿ ಅವರ ಭೇಟಿಯೊಂದಿಗೆ ಹೊಂದಿಕೆಯಾಗುತ್ತಿದ್ದು, ಇದರಿಂದ ಭಾರತ ಮತ್ತು ಮ್ಯಾನ್ಮಾರ್ ನಡುವಿನ ದ್ವಿಪಕ್ಷೀಯ ಸಾಗರ ಸಹಭಾಗಿತ್ವದ ಮತ್ತಷ್ಟು ಬಲವರ್ಧನೆಯಾಗಲಿದೆ ಎಂದು ನಿರೀಕ್ಷಿಸಲಾಗುತ್ತಿದೆ. ಭಾರತದ ಮಹಾಸಾಗರ ನೀತಿಗೆ ಅನುಗುಣವಾಗಿ ರಕ್ಷಣಾ ಸಚಿವಾಲಯ ನೌಕೆಯನ್ನು ಮ್ಯಾನ್ಮಾರ್‌ಗೆ ನಿಯೋಜಿಸಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>